# ಕರ್ನಾಟಕಸರ್ಕಾರ

**ಸಂಖ್ಯೆ:** ಹಿಂವಕ 390 ಬಿಎಂಎಸ್ 2021

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 10/06/2022.

## ಸುತ್ತೋಲೆ

**ವಿಷಯ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿದ್ಯಾರ್ಥಿಗಳ ಕೊರತೆಯಿಂದ ಪ್ರಸ್ತುತ ಖಾಲಿ ಇರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಸ್ವಂತ ಕಟ್ಟಡ ಹೊಂದಿರುವ ವಿದ್ಯಾರ್ಥಿನಿಲಯಗಳನ್ನು ತಾತ್ಕಾಲಿಕವಾಗಿ ಬಳಸುವ ಬಗ್ಗೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸ್ವಂತ ಕಟ್ಟಡ ಹೊಂದಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ವಿದ್ಯಾರ್ಥಿಗಳ ಕೊರತೆಯಿಂದ ಸ್ಥಳಾಂತರಗೊಂಡು ಪ್ರಸ್ತುತ ಹಲವು ತಿಂಗಳುಗಳಿಂದ ಖಾಲಿ ಇರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಇಂತಹ ಖಾಲಿ ಇರುವ ಕಟ್ಟಡಗಳನ್ನು ಸದ್ಬಳಕೆ ಮಾಡಿಕೊಳ್ಳುವುದು ಅವಶ್ಯಕವಾಗಿರುತ್ತದೆ. ಆದ್ದರಿಂದ, ಸದರಿ ವಿದ್ಯಾರ್ಥಿನಿಲಯಗಳನ್ನು ತಾತ್ಕಾಲಿಕವಾಗಿ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಇಲಾಖೆಯ ತಾಲ್ಲೂಕು ಕಚೇರಿಗಳನ್ನು ಸ್ಥಳಾಂತರಿಸಲು ಕ್ರಮವಹಿಸುವುದು, ಒಂದು ವೇಳೆ ಇಲಾಖೆಯ ತಾಲ್ಲೂಕು ಕಚೇರಿಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಸದರಿ ಕಟ್ಟಡವನ್ನು ಗ್ರಾಮ ಪಂಚಾಯತಿಯ ವತಿಯಿಂದ ಇತರ ಶೈಕ್ಷಣಿಕ ಉದ್ದೇಶಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಬಳಸುವುದು.

**ಷರತ್ತುಗಳು:**

1. ಸ್ವಂತ ಕಟ್ಟಡ ಹೊಂದಿರುವ ಇಲಾಖೆಯ ವಿದ್ಯಾರ್ಥಿನಿಲಯಗಳು ಬಹಳ ತಿಂಗಳುಗಳಿಂದ ಖಾಲಿ ಇದ್ದು, ಸದರಿ ಕಟ್ಟಡದಲ್ಲಿ ನಡೆಯುತ್ತಿರುವ ವಿದ್ಯಾರ್ಥಿನಿಲಯವು ಸ್ಥಳಾಂತರಗೊಂಡಿರುವ ಬಗ್ಗೆ ಹಾಗೂ ಸುಸ್ಥಿತಿಯಲ್ಲಿರುವ ಬಗ್ಗೆ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವರದಿ ಪಡೆಯತಕ್ಕದ್ದು.
2. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲ್ಲೂಕು/ಜಿಲ್ಲಾ ಕಚೇರಿಯು ಪ್ರಸ್ತುತ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಬಗ್ಗೆ ಹಾಗೂ ಸದರಿ ಕಚೇರಿಯನ್ನು ವಿದ್ಯಾರ್ಥಿನಿಲಯದಲ್ಲಿ ಸ್ಥಳಾಂತರಿಸಲು ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವರದಿ ಪಡೆಯತಕ್ಕದ್ದು
3. ಸದರಿ ವರ್ಗಾವಣೆಯು ತಾತ್ಕಾಲಿಕವಾಗಿದ್ದು, ಇಲಾಖೆಯ ಕಾರ್ಯಗಳಿಗೆ ಅವಶ್ಯವಿದ್ದಲ್ಲಿ ಸದರಿ ಕಟ್ಟಡವನ್ನು ವಾಪಸಾತಿ ಪಡೆಯಲು ಕರಾರು ಮಾಡಿಕೊಳ್ಳತಕ್ಕದ್ದು.
4. ಕಟ್ಟಡವು ಗ್ರಾಮ ಪಂಚಾಯತಿಯ ವಶದಲ್ಲಿದ್ದಾಗ ಕಟ್ಟಡದಲ್ಲಿನ ರಿಪೇರಿಗಳನ್ನು ಗ್ರಾಮ ಪಂಚಾಯತಿಯ ವೆಚ್ಚದಲ್ಲಿ ಮಾಡಿಸತಕ್ಕದ್ದು ಹಾಗೂ ಕಟ್ಟಡವನ್ನು ಯಾವುದೇ ರೀತಿ ಬದಲಾಯಿಸತಕ್ಕದಲ್ಲ ಹಾಗೂ ಯಾವುದೇ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದಲ್ಲ.
5. ಜಿಲ್ಲೆಯ ಜಿಲ್ಲಾಧಿಕಾರಿಗಳು ಇಲಾಖೆಯ ಸುಪರ್ದಿಗೆ ವಾಪಸ್ಸು ಪಡೆಯುವಾಗ ಕಟ್ಟಡವನ್ನು ಹಸ್ತಾಂತರಿಸುವಾಗ ಯಾವ ಸುಸ್ಥಿಯಲ್ಲಿರುವುದೋ ಅದೇ ಸುಸ್ಥಿತಿಯಲ್ಲಿರುವುದನ್ನು ಖಚಿತಪಡಿಸಿಕೊಳ್ಳುವುದು ಒಂದು ವೇಳೆ ಕಟ್ಟಡಕ್ಕೆ ಅಥವಾ ಮೂಲಭೂತ ಸೌಕರ್ಯಗಳಿಗೆ ಹಾನಿಯಾಗಿದ್ದಲ್ಲಿ ಗ್ರಾಮ ಪಂಚಾಯತಿಯು ತನ್ನ ವೆಚ್ಚದಲ್ಲಿ ರಿಪೇರಿ ಕಾರ್ಯವನ್ನು ಮಾಡಿ ಕಟ್ಟಡವನ್ನು ಹಿಂದಿರುಗಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.

..2

6. ಇಂತಹ ಖಾಲಿ ಇರುವ ಪ್ರತಿ ವಿದ್ಯಾರ್ಥಿನಿಲಯವನ್ನು ಬಳಸಿಕೊಳ್ಳುವುದಕ್ಕೆ ಸಂಬಂಧಿಸಿದಂತೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು Case by Case ನಂತೆ ಕೂಲಂಕುಷವಾಗಿ ಪರಿಶೀಲಿಸಿ ಅನುಮತಿ ನೀಡತಕ್ಕದ್ದು.

Sheenparveen 10/06/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಸಂತನಗರ, ಬೆಂಗಳೂರು.
2. ಎಲ್ಲಾ ಜಿಲ್ಲಾಧಿಕಾರಿಗಳು.(ಆಯುಕ್ತರು, ಹಿಂವಕ ಇವರ ಮುಖಾಂತರ)
3. ಎಲ್ಲಾ ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು. (ಆಯುಕ್ತರು, ಹಿಂವಕ ಇವರ ಮುಖಾಂತರ)
4. ಎಲ್ಲಾ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ಆಯುಕ್ತರು, ಹಿಂವಕ ಇವರ ಮುಖಾಂತರ)

ಪ್ರತಿ:

1. ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ

*******